All India Radio: Bangalore
National Bulletin In Kannada
16.06.2026 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

1. ಎವಿಯಾನ್‌ನಲ್ಲಿ ಜಿ-೭ ಶೃಂಗಸಭೆ ಆರಂಭ ; ಪ್ರಮುಖ ಜಾಗತಿಕ ಸವಾಲುಗಳ ಕುರಿತು ನಾಯಕರ ಚರ್ಚೆ
2. ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸ್ಲೋವಾಕಿಯಾದ ಅತ್ಯುನ್ನತ ನಾಗರಿಕ ಗೌರವ ಸನ್ಮಾನ
3. ನವದೆಹಲಿಯಲ್ಲಿಂದು 'ವಿಕಸಿತ ಭಾರತ ಯುವ ಸಂಸತ್' ಉದ್ಘಾಟಿಸಲಿರುವ ಲೋಕಸಭಾಧ್ಯಕ್ಷ ಓಂ ಬಿರ್ಲಾ
4. ಡೀಸೆಲ್ ಮತ್ತು ವಿಮಾನ ಇಂಧನ ರಫ್ತು ಸುಂಕ ಹೆಚ್ಚಿಸಿದ ಕೇಂದ್ರ ಸರ್ಕಾರ
5. ಫಿಫಾ ವಿಶ್ವಕಪ್ ಫುಟ್ಬಾಲ್ ಟೂರ್ನಿ : ಸ್ಪೇನ್ ವಿರುದ್ಧ ಅಚ್ಚರಿಯ ಡ್ರಾ ಸಾಧಿಸಿದ ಕಾಬೊ ವರ್ಡೆ ತಂಡ

<><><><>

ಫ್ರಾನ್ಸ್‌ನ ಎವಿಯಾನ್‌ನಲ್ಲಿ ೫೨ನೇ ಜಿ೭ ಶೃಂಗಸಭೆಯು ನಿನ್ನೆ ಅಧಿಕೃತವಾಗಿ ಆರಂಭವಾಗಿದ್ದು, ವಿಶ್ವದ ಪ್ರಮುಖ ಆರ್ಥಿಕ ರಾಷ್ಟ್ರಗಳ ನಾಯಕರು ಜಾಗತಿಕ ಮಟ್ಟದ ಪ್ರಮುಖ ಸವಾಲುಗಳ ಕುರಿತು ಮಹತ್ವದ ಚರ್ಚೆಗಳನ್ನು ನಡೆಸುತ್ತಿದ್ದಾರೆ. ಶೃಂಗಸಭೆಯ ಮೊದಲ ದಿನದ ಭಾಗವಾಗಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ "ಪ್ರಮುಖ ಅಂತರರಾಷ್ಟ್ರೀಯ ಸವಾಲುಗಳನ್ನು ಎದುರಿಸಲು ಒಟ್ಟಾಗಿ ಶ್ರಮಿಸುವುದು" ಎಂಬ ವಿಷಯದ ಅಡಿಯಲ್ಲಿ ಆಯೋಜಿಸಿದ್ದ ವಿಶೇಷ ಭೋಜನಕೂಟದಲ್ಲಿ ವಿವಿಧ ದೇಶಗಳ ಮುಖ್ಯಸ್ಥರು ಪಾಲ್ಗೊಂಡಿದ್ದರು. ಇದಕ್ಕೂ ಮುನ್ನ, ಅಧ್ಯಕ್ಷ ಮ್ಯಾಕ್ರನ್ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಸೇರಿದಂತೆ ಜಿ೭ ದೇಶಗಳ ನಾಯಕರನ್ನು ಅಧಿಕೃತವಾಗಿ ಸ್ವಾಗತಿಸಿದರು. ಈ ಉನ್ನತ ಮಟ್ಟದ ಸಭೆಯಲ್ಲಿ ಐರೋಪ್ಯ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯನ್ ಮತ್ತು ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಕೋಸ್ಟಾ ಅವರೂ ಉಪಸ್ಥಿತರಿದ್ದಾರೆ. ಮೂರು ದಿನಗಳ ಕಾಲ

ನಡೆಯಲಿರುವ ಈ ಶೃಂಗಸಭೆಯಲ್ಲಿ, ಜಾಗತಿಕ ಅಸಮತೋಲನವನ್ನು ಕಡಿಮೆ ಮಾಡುವುದು, ಪ್ರಮುಖ ಬಿಕ್ಕಟ್ಟುಗಳನ್ನು ಪರಿಹರಿಸುವುದು, ಮಕ್ಕಳ ಕಲ್ಯಾಣಕ್ಕೆ ಸಂಬಂಧಿಸಿದ ಸಮಸ್ಯೆಗಳು ಹಾಗೂ ಸಂಘಟಿತ ಅಪರಾಧಗಳು ಮತ್ತು ಅಕ್ರಮ ಹಣಕಾಸು ಹರಿವಿನ ವಿರುದ್ಧದ ಹೋರಾಟವನ್ನು ಬಲಪಡಿಸುವ ಕುರಿತು ನಾಯಕರು ಸುದೀರ್ಘ ಸಮಾಲೋಚನೆ ನಡೆಸಲಿದ್ದಾರೆ. ಜಿ೭ ಶೃಂಗಸಭೆಯು ಕೆನಡಾ, ಫ್ರಾನ್ಸ್, ಜರ್ಮನಿ, ಇಟಲಿ, ಜಪಾನ್, ಯುಕೆ ಮತ್ತು ಅಮೆರಿಕ ದೇಶಗಳನ್ನೊಳಗೊಂಡ ಸದಸ್ಯ ರಾಷ್ಟ್ರಗಳ ವಾರ್ಷಿಕ ಅತ್ಯುನ್ನತ ಅಂತರರಾಷ್ಟ್ರೀಯ ವೇದಿಕೆಯಾಗಿದೆ.

<><><><>

ಸ್ಲೋವಾಕಿಯಾ ಗಣರಾಜ್ಯದ ಅಧ್ಯಕ್ಷ ಪೀಟರ್ ಪೆಲೆಗ್ರಿನಿ ಭಾರತದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸ್ಲೋವಾಕಿಯಾದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ "ದಿ ಆರ್ಡರ್ ಆಫ್ ದಿ ವೈಟ್ ಡಬಲ್ ಕ್ರಾಸ್, ಫಸ್ಟ್ ಕ್ಲಾಸ್" ಗೌರವವನ್ನು ಪ್ರದಾನ ಮಾಡಿದ್ದಾರೆ. ಈ ಪ್ರತಿಷ್ಠಿತ ಮತ್ತು ವಿಶಿಷ್ಟ ಗೌರವಕ್ಕಾಗಿ ಪ್ರಧಾನಿ, ಸ್ಲೋವಾಕಿಯಾ ಅಧ್ಯಕ್ಷರು, ಸರ್ಕಾರ ಮತ್ತು ಅಲ್ಲಿನ ಜನತೆಗೆ ತಮ್ಮ ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ. ಪ್ರಶಸ್ತಿಯನ್ನು ಸ್ವೀಕರಿಸಿ ಮಾತನಾಡಿದ ಪ್ರಧಾನಿ, ಈ ಅತ್ಯುನ್ನತ ಗೌರವ ಭಾರತದ ೧೪೦ ಕೋಟಿ ಜನತೆಗೆ ಸಂದ ಗೌರವವಾಗಿದೆ ಮತ್ತು ಇದು ಭಾರತ ಹಾಗೂ ಸ್ಲೋವಾಕಿಯಾ ದೇಶಗಳ ನಡುವಿನ ದೀರ್ಘಕಾಲೀನ ಸ್ನೇಹ ಸಂಬಂಧಕ್ಕೆ ಸಂದ ಗೌರವವಾಗಿದೆ ಎಂದು ತಿಳಿಸಿದ್ದಾರೆ. ಈ ಪ್ರಶಸ್ತಿಯು ಭಾರತ ಮತ್ತು ಸ್ಲೋವಾಕಿಯಾ ದೇಶಗಳ ಜನರ ನಡುವಿನ ಪರಸ್ಪರ ವಿಶ್ವಾಸ, ಆತ್ಮೀಯತೆ ಮತ್ತು ಪ್ರೀತಿಯ ಸಂಕೇತವಾಗಿದೆ ಎಂದು ಬಣ್ಣಿಸಿದ ಪ್ರಧಾನಿ, ಉಭಯ ದೇಶಗಳ ಮುಂಬರುವ ಪೀಳಿಗೆಗೆ ತಮ್ಮ ನಡುವಿನ ವಿಶೇಷ ಸ್ನೇಹ ಸಂಬಂಧವನ್ನು ಇನ್ನಷ್ಟು ಬಲಪಡಿಸಲು ಮತ್ತು ಪೋಷಿಸಲು ಈ ಗೌರವ ನಿರಂತರ ಪ್ರೇರಣೆ ನೀಡಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<><><><>

ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯ ವತಿಯಿಂದ ನವದೆಹಲಿಯಲ್ಲಿ ಇಂದು ಆಯೋಜಿಸಲಾಗಿರುವ ವಿಕಸಿತ ಭಾರತ ಯುವ ಸಂಸತ್ತನ್ನು ಲೋಕಸಭೆಯ ಸಭಾಧ್ಯಕ್ಷ ಓಂ ಬಿರ್ಲಾ ರಾಷ್ಟ್ರಮಟ್ಟದ ಉದ್ಘಾಟಿಸಲಿದ್ದಾರೆ ಎಂದು ಸಚಿವಾಲಯ ತಿಳಿಸಿದೆ. ಈ ಉಪಕ್ರಮವು ಪ್ರಜಾಪ್ರಭುತ್ವ ಪ್ರಕ್ರಿಯೆಗಳಲ್ಲಿ ಯುವಜನರ ಪಾಲ್ಗೊಳ್ಳುವಿಕೆ, ಆಡಳಿತ, ನೀತಿ ಚರ್ಚೆಗಳು ಹಾಗೂ

ಸಂಸತ್ತಿನ ಕಾರ್ಯವೈಖರಿಯ ಬಗ್ಗೆ ಯುವ ನಾಗರಿಕರಿಗೆ ನೇರ ಅನುಭವದ ಮೂಲಕ ಅರಿವು ಮೂಡಿಸುವ ಅವಕಾಶವನ್ನು ನೀಡುತ್ತದೆ ಎಂದು ಸಚಿವಾಲಯ ತಿಳಿಸಿದೆ. ಈ ಕಾರ್ಯಕ್ರಮ ಭಾರತದ ಯುವ ಶಕ್ತಿ, ಅವರ ಆಲೋಚನೆಗಳು ಮತ್ತು ಆಶೋತ್ತರಗಳನ್ನು ರಾಷ್ಟ್ರದ ಚರ್ಚೆಯ ಮುಖ್ಯವಾಹಿನಿಗೆ ತರುವ ಒಂದು ಚಳವಳಿಯಾಗಿದೆ ಎಂದು ಸಚಿವಾಲಯ ತಿಳಿಸಿದೆ.

<><><><>

ಅಯೋಧ್ಯೆಯ ರಾಮಮಂದಿರದಲ್ಲಿ ಭಕ್ತರು ನೀಡಿದ ಕಾಣಿಕೆ ಹಾಗೂ ಅಮೂಲ್ಯ ವಸ್ತುಗಳ ದುರ್ಬಳಕೆ ಆರೋಪಗಳ ಕುರಿತು ತನಿಖೆ ನಡೆಸಲು ರಚಿಸಲಾದ ವಿಶೇಷ ತನಿಖಾ ತಂಡ- ಎಸ್‌ಐಟಿ ಇಂದು ತನ್ನ ತನಿಖೆಯನ್ನು ಆರಂಭಿಸಿದೆ. ಲಖನೌ ವಿಭಾಗೀಯ ಆಯುಕ್ತ ವಿಜಯ್ ವಿಶ್ವಾಸ್ ಪಂತ್ ನೇತೃತ್ವದ ಈ ಎಸ್‌ಐಟಿಯಲ್ಲಿ, ಪೊಲೀಸ್ ಮಹಾನಿರೀಕ್ಷಕ ಕಿರಣ್ ಎಸ್ ಹಾಗೂ ಹಣಕಾಸು ಇಲಾಖೆಯ ವಿಶೇಷ ಕಾರ್ಯದರ್ಶಿ ನೀಲ್ ರತನ್ ಸದಸ್ಯರಾಗಿದ್ದಾರೆ. ಎಸ್‌ಐಟಿ ಸದಸ್ಯರು ಅಯೋಧ್ಯೆಗೆ ಆಗಮಿಸಿ ತನಿಖೆ ಆರಂಭಿಸಿದ್ದು, ನಿನ್ನೆ ಅಯೋಧ್ಯೆ ಆಯುಕ್ತರು ಹಾಗೂ ಜಿಲ್ಲಾಧಿಕಾರಿಗಳೊಂದಿಗೆ ರಾಮಮಂದಿರ ಆವರಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು.

<><><><>

ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ದೇಶೀಯ ಮಾರುಕಟ್ಟೆಯಲ್ಲಿ ಪೆಟ್ರೋಲಿಯಂ ಉತ್ಪನ್ನಗಳ ಕೊರತೆಯಾಗದಂತೆ ನೋಡಿಕೊಳ್ಳಲು ಕೇಂದ್ರ ಸರ್ಕಾರವು ಡೀಸೆಲ್ ಮತ್ತು ವಿಮಾನ ಇಂಧನ ರಫ್ತಿನ ಮೇಲಿನ ವಿಶೇಷ ಹೆಚ್ಚುವರಿ ಅಬಕಾರಿ ಸುಂಕವನ್ನು ಹೆಚ್ಚಿಸಿದೆ. ಪರಿಷ್ಕೃತ ದರಗಳು ಇಂದಿನಿಂದಲೇ ಜಾರಿಗೆ ಬರಲಿವೆ.  ಹೊಸ ಆದೇಶದ ಪ್ರಕಾರ, ಡೀಸೆಲ್ ರಫ್ತು ಸುಂಕವನ್ನು ಪ್ರತಿ ಲೀಟರ್‌ಗೆ ೧೩ ರೂಪಾಯಿ ೫ ಪೈಸೆಯಿಂದ ೧೪ ರೂಪಾಯಿಗೆ ಹಾಗೂ ವಿಮಾನ ಇಂಧನ ರಫ್ತು ಸುಂಕವನ್ನು ಪ್ರತಿ ಲೀಟರ್‌ಗೆ ೯ ರೂಪಾಯಿ ೫ ಪೈಸೆಯಿಂದ ೧೨ ರೂಪಾಯಿ ೫ ಪೈಸೆಗೆ ಹೆಚ್ಚಿಸಲಾಗಿದೆ. ಆದರೆ, ಪೆಟ್ರೋಲ್ ರಫ್ತು ಸುಂಕದಲ್ಲಿ ಯಾವುದೇ ಬದಲಾವಣೆ ಮಾಡದೆ ಪ್ರತಿ ಲೀಟರ್‌ಗೆ ೧ ರೂಪಾಯಿ ೫ ಪೈಸೆ ಉಳಿಸಿಕೊಳ್ಳಲಾಗಿದೆ. ದೇಶೀಯ ಬಳಕೆಯ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಸುಂಕದ ದರಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ದೇಶೀಯ ಮಾರುಕಟ್ಟೆಗೆ ಆದ್ಯತೆ ನೀಡಲು ಮತ್ತು ವಿದೇಶಿ ರಫ್ತುಗಳನ್ನು ನಿಯಂತ್ರಿಸಲು ಸರ್ಕಾರವು ಮಾರ್ಚ್ ೨೭ ರಿಂದ ಈ ರಫ್ತು ಸುಂಕದ ವ್ಯವಸ್ಥೆಯನ್ನು ಜಾರಿಗೆ ತಂದಿದೆ.

<><><><>

ಕಳೆದ ೧೨ ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಭಯೋತ್ಪಾದನೆ ವಿರುದ್ಧ ಶೂನ್ಯ ಸಹಿಷ್ಣುತೆ ನೀತಿಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಿದೆ. ಕಳೆದ ವರ್ಷ ಮೇ ೬ ಮತ್ತು ೭ರ ಮಧ್ಯರಾತ್ರಿ ನಡೆಸಲಾದ ಆಪರೇಷನ್ ಸಿಂಧೂರ್ ಮೂಲಕ ಭಾರತ ಭಯೋತ್ಪಾದನೆಯನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂಬ ಸ್ಪಷ್ಟ ಸಂದೇಶವನ್ನು ಜಗತ್ತಿಗೆ ರವಾನಿಸಿತು. ಲಷ್ಕರ್-ಎ-ತೊಯ್ಬಾ, ಜೈಶ್-ಎ-ಮೊಹಮ್ಮದ್ ಮತ್ತು ಹಿಜ್ಬುಲ್ ಮುಜಾಹಿದ್ದೀನ್ ಸಂಘಟನೆಗಳ ನೆಲೆಗಳನ್ನು ಗುರಿಯಾಗಿಸಿಕೊಂಡು ನಡೆಸಿದ ಈ ಕಾರ್ಯಾಚರಣೆಯಲ್ಲಿ ಪಾಕಿಸ್ತಾನ ಹಾಗೂ ಪಾಕ್ ಆಕ್ರಮಿತ ಜಮ್ಮು-ಕಾಶ್ಮೀರದಲ್ಲಿದ್ದ ಒಂಬತ್ತು ಪ್ರಮುಖ ಉಗ್ರರ ನೆಲೆಗಳನ್ನು ಧ್ವಂಸಗೊಳಿಸಲಾಯಿತು. ೧೦೦ಕ್ಕೂ ಹೆಚ್ಚು ಉಗ್ರರು ಹತರಾಗಿದ್ದರು. ಇದೇ ವೇಳೆ, ರಾಷ್ಟ್ರೀಯ ಭದ್ರತೆಯನ್ನು ಬಲಪಡಿಸುವ ಉದ್ದೇಶದಿಂದ ಭಾರತ-ಬಾಂಗ್ಲಾದೇಶ ಗಡಿಯಲ್ಲಿ ಬೇಲಿ ನಿರ್ಮಾಣ ಕಾರ್ಯಕ್ಕೆ ಸರ್ಕಾರ ವೇಗ ನೀಡಿದೆ. ಗಡಿ ಭದ್ರತೆ, ಭಯೋತ್ಪಾದನೆ ನಿಗ್ರಹ ಹಾಗೂ ರಕ್ಷಣಾ ಕ್ಷೇತ್ರದಲ್ಲಿ ಆತ್ಮನಿರ್ಭರತೆಯತ್ತ ಸರ್ಕಾರ ಮಹತ್ವದ ಕ್ರಮಗಳನ್ನು ಕೈಗೊಂಡಿದೆ.

<><><><>

ಕೇಂದ್ರ ಲೋಕಸೇವಾ ಆಯೋಗ-ಯುಪಿಎಸ್‌ಸಿ ಈ ವರ್ಷದ ನಾಗರಿಕ ಸೇವೆಗಳ ಪೂರ್ವಭಾವಿ ಪರೀಕ್ಷೆಯ ಫಲಿತಾಂಶವನ್ನು ಪ್ರಕಟಿಸಿದೆ. ಸಾವಿರಕ್ಕೂ ಹೆಚ್ಚು ಹುದ್ದೆಗಳ ಭರ್ತಿಗಾಗಿ ನಡೆದ ಪರೀಕ್ಷೆಯಲ್ಲಿ ೧೩ ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳು ನಾಗರಿಕ ಸೇವೆಗಳ ಮುಖ್ಯ ಪರೀಕ್ಷೆಗೆ ಆಯ್ಕೆಯಾಗಿದ್ದಾರೆ ಎಂದು ಯುಪಿಎಸ್‌ಸಿ ತಿಳಿಸಿದೆ. ಅಂಕಗಳು, ಹಾಗೂ ಉತ್ತರ ಕೀಲಿಯನ್ನು ಅಂತಿಮ ಫಲಿತಾಂಶ ಪ್ರಕಟವಾದ ಬಳಿಕ ಆಯೋಗದ ಜಾಲತಾಣದಲ್ಲಿ ಪ್ರಕಟಿಸಲಾಗುವುದು ಎಂದು ತಿಳಿಸಲಾಗಿದೆ. ಅಭ್ಯರ್ಥಿಗಳು ತಮ್ಮ ಫಲಿತಾಂಶವನ್ನು ಯುಪಿಎಸ್‌ಸಿಯ ಅಧಿಕೃತ ಜಾಲತಾಣ, upsc.gov.in. ನಲ್ಲಿ ವೀಕ್ಷಿಸಬಹುದು.

<><><><>

ಕಳೆದ ನಾಲ್ಕು ತಿಂಗಳುಗಳಿಂದ ಪಶ್ಚಿಮ ಏಷ್ಯಾದಲ್ಲಿ ಮುಂದುವರಿದಿದ್ದ ಸಂಘರ್ಷಕ್ಕೆ ಅಂತ್ಯಹಾಡುವ ನಿಟ್ಟಿನಲ್ಲಿ ಅಮೆರಿಕ ಮತ್ತು ಇರಾನ್ ದೇಶಗಳು ಮಹತ್ವದ ಚೌಕಟ್ಟು ಒಪ್ಪಂದವನ್ನು ಘೋಷಿಸಿವೆ. ಉಭಯ ದೇಶಗಳ ನಡುವೆ ಈಗಾಗಲೇ ತಿಳುವಳಿಕಾ ಪತ್ರಕ್ಕೆ ಸಹಿ ಹಾಕಲಾಗಿದ್ದು, ಶುಕ್ರವಾರದಂದು ಸ್ವಿಟ್ಜರ್‌ಲ್ಯಾಂಡ್‌ನ ಜಿನೆವಾದಲ್ಲಿ ಅಧಿಕೃತ ಸಹಿ ಹಾಕುವ ಕಾರ್ಯಕ್ರಮ

ನಡೆಯಲಿದೆ. ಈ ಒಪ್ಪಂದದ ಅನ್ವಯ, ಜಗತ್ತಿನ ಅತ್ಯಂತ ನಿರ್ಣಾಯಕ ಜಲಮಾರ್ಗವಾದ 'ಹಾರ್ಮುಜ್ ಜಲಸಂಧಿ'ಯನ್ನು ಮರುಚಾಲನೆಗೊಳಿಸಲು ಹಾದಿ ಸುಗಮವಾಗಲಿದ್ದು, ಇರಾನ್‌ನ ಪರಮಾಣು ಕಾರ್ಯಕ್ರಮದ ಕುರಿತು ೬೦ ದಿನಗಳ ಕಾಲಾವಕಾಶದ ಮಾತುಕತೆಗಳು ಆರಂಭವಾಗಲಿವೆ. ಈ ಸಕಾರಾತ್ಮಕ ಬೆಳವಣಿಗೆಯಿಂದಾಗಿ ಜಾಗತಿಕ ಮಾರುಕಟ್ಟೆಯಲ್ಲಿ ತೈಲ ಬೆಲೆಗಳು ಇಳಿಕೆ ಕಂಡಿವೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯಾನ್ ಈ ಬೆಳವಣಿಗೆಯನ್ನು ಸ್ವಾಗತಿಸಿದ್ದು, ಯುದ್ಧ ಕೊನೆಗೊಳಿಸುವ ನಿಟ್ಟಿನಲ್ಲಿ ಇದನ್ನು ಪ್ರಮುಖ ಹೆಜ್ಜೆ ಎಂದು ಬಣ್ಣಿಸಿದ್ದಾರೆ. ಆದಾಗ್ಯೂ, ನಿರ್ಬಂಧಗಳ ಸಡಿಲಿಕೆ, ಜಲಮಾರ್ಗದ ಸುಂಕ ಮತ್ತು ಇಸ್ರೇಲ್-ಲೆಬನಾನ್ ಗಡಿ ಸಂಘರ್ಷದಂತಹ ಪ್ರಮುಖ ವಿಷಯಗಳಲ್ಲಿ ಇನ್ನು ಭಿನ್ನಾಭಿಪ್ರಾಯಗಳು ಮುಂದುವರಿದಿವೆ. ಈ ಒಪ್ಪಂದ, ಆ ವಲಯದಲ್ಲಿ ಸುದೀರ್ಘ ಶಾಂತಿಗೆ ದಾರಿಯಾಗಲಿದೆಯೇ ಎಂಬುದನ್ನು ಮುಂಬರುವ ದಿನಗಳು ನಿರ್ಧರಿಸಲಿವೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

<><><><>

ಫಿಫಾ ವಿಶ್ವಕಪ್-೨೦೨೬ರಲ್ಲಿ ಮೊದಲ ಬಾರಿಗೆ ವಿಶ್ವಕಪ್‌ಗೆ ಅರ್ಹತೆ ಪಡೆದಿರುವ ಪುಟ್ಟ ರಾಷ್ಟ್ರ ಕಾಬೊ ವರ್ಡೆ, ಬಲಿಷ್ಠ ಸ್ಪೇನ್ ತಂಡವನ್ನು ಗೋಲುರಹಿತ ಡ್ರಾಗೆ ತಡೆದು ಅಚ್ಚರಿ ಮೂಡಿಸಿದೆ. ೪೦ ವರ್ಷದ ಗೋಲ್‌ಕೀಪರ್ ವೋಜಿನ್ಹಾ ಅವರ ಅದ್ಭುತ ಪ್ರದರ್ಶನದ ನೆರವಿನಿಂದ ಕಾಬೊ ವರ್ಡೆ ೦-೦ ಅಂತರದಲ್ಲಿ ಪಂದ್ಯವನ್ನು ಸಮಬಲದಲ್ಲಿ ಅಂತ್ಯಗೊಳಿಸಿತು. ಇದುವರೆಗೆ ಟೂರ್ನಿಯ ಅತಿದೊಡ್ಡ ಅಚ್ಚರಿ ಫಲಿತಾಂಶವೆಂದು ಪರಿಗಣಿಸಲಾಗಿದೆ. ಇದೇ ವೇಳೆ, ಅಮೆರಿಕದ ಮಿಯಾಮಿ ಕ್ರೀಡಾಂಗಣದಲ್ಲಿ ನಡೆದ 'ಎಚ್' ಗುಂಪಿನ ಪಂದ್ಯದಲ್ಲಿ ಸೌದಿ ಅರೇಬಿಯಾ ಮತ್ತು ಉರುಗ್ವೆ ತಂಡಗಳು ೧-೧ ಅಂತರದಲ್ಲಿ ಡ್ರಾ ಸಾಧಿಸಿವೆ. 'ಜಿ' ಗುಂಪಿನ ಮತ್ತೊಂದು ಪಂದ್ಯದಲ್ಲಿ ಬೆಲ್ಜಿಯಂ ಮತ್ತು ಈಜಿಪ್ಟ್ ತಂಡಗಳು ೧-೧ ಅಂತರದಲ್ಲಿ ಡ್ರಾ ಮಾಡಿಕೊಂಡಿವೆ. ಕ್ಯಾಲಿಫೋರ್ನಿಯಾದ ಲಾಸ್ ಏಂಜಲೀಸ್‌ನಲ್ಲಿಂದು ನಡೆಯುತ್ತಿರುವ ಮತ್ತೊಂದು 'ಜಿ' ಗುಂಪಿನ ಪಂದ್ಯದಲ್ಲಿ ಇರಾನ್ ಮತ್ತು ನ್ಯೂಜಿಲೆಂಡ್ ತಂಡಗಳು ಮುಖಾಮುಖಿಯಾಗಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>